# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 83 |
| ಸದಸ್ಯರ ಹೆಸರು | : | ಶ್ರೀ. ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12-09-2022 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪಶ್ಚಿಮ ಘಟ್ಟದ ಅರಣ್ಯ ಪ್ರದೇಶಗಳಲ್ಲಿ ಪವನ ವಿದ್ಯುತ್ ಹಾಗೂ ಕಿರು ಜಲ ವಿದ್ಯುತ್ ಯೋಜನೆಗಳಿಗೆ ಅವಕಾಶ ಕಲ್ಪಿಸಲಾಗಿದೆಯೇ; (ವಿವರ ನೀಡುವುದು) | ರಾಜ್ಯದ ಅರಣ್ಯ ಪ್ರದೇಶಗಳನ್ನು ಅರಣ್ಯೇತರ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಬೇಕಾದರೆ ಕೇಂದ್ರ ಸರ್ಕಾರದಿಂದ ಅರಣ್ಯ ಸಂರಕ್ಷಣಾ ಕಾಯ್ದೆ 1980ರಡಿಯಲ್ಲಿ ಅರಣ್ಯ ನಿಯಮಗಳು ಹಾಗು ಅರಣ್ಯ ಸಂರಕ್ಷಣಾ ಕಾಯ್ದೆ ಮಾರ್ಗಸೂಚಿಯಂತೆ ಪೂರ್ವಾನುಮೋದನೆಯನ್ನು ಪಡೆಯಬೇಕಾಗುತ್ತದೆ.<br><br>ಅರಣ್ಯ ಪ್ರದೇಶಗಳಲ್ಲಿ ಹಲವಾರು ಅಭಿವೃದ್ಧಿ ಯೋಜನೆಗಳಿಗೆ ಅಂದರೆ ರೈಲ್ವೆ, ರಸ್ತೆ, ವಿದ್ಯುತ್ ಪ್ರಸರಣ ಮಾರ್ಗಕ್ಕಾಗಿ ಹಾಗೆಯೇ ಪವನ ವಿದ್ಯುತ್ ಹಾಗೂ ಕಿರು ಜಲ ವಿದ್ಯುತ್ ಯೋಜನೆಗಳಿಗೂ ಸಹ ಅರಣ್ಯ ಸಂರಕ್ಷಣಾ ಕಾಯ್ದೆ 1980ರಲ್ಲಿ ನಮೂದಿಸಿದ ಮಾರ್ಗಸೂಚಿಗಳನ್ವಯ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅನುಮೋದನೆ ಪಡೆದು ಕೊಳ್ಳಲಾಗುತ್ತದೆ.<br><br>ಕೇಂದ್ರ ಸರ್ಕಾರದ ಪರಿಸರ ಆಘಾತ ಅಂದಾಜೀಕರಣ ಅಧಿಸೂಚನೆ, 2006 (EIA Notification, 2006)ರ ಅಡಿಯಲ್ಲಿ ಜಲ ವಿದ್ಯುತ್ ಯೋಜನೆಗಳಿಗೆ ಷರತ್ತುಬದ್ಧ ಪೂರ್ವಾನುಮೋದನೆಯೊಂದಿಗೆ ಅವಕಾಶ ಕಲ್ಪಿಸಲಾಗಿದೆ. |
| ಆ) | ಹೌದಾದಲ್ಲಿ, ಈ ಕುರಿತು ರಚಿಸಿರುವ ನಿಯಮಗಳೇನು? (ವಿವರ ನೀಡುವುದು) | |

ಸಂಖ್ಯೆ: ಅಪಜೀ 112 ಎಫ್‌ಎಲ್‌ಎಲ್ 2022

(ಬಸವರಾಜ ಎಸ್. ಬೊಮ್ಮಾಯಿ)
ಮುಖ್ಯಮಂತ್ರಿಯವರು